9. Al-Ameem Medical College, Bijapur - 586101.
10. Adi Chunchanagiri Institute of Medical Sciences, Balagangadharanagar - 571448, Nagamangala Taluk, Mandya District.
11. Sri Devaraj Urs Medical College, Tamaka, Kolar.
12. Sri Siddartha Medical College, Tumkur.
13. Kempegowda Institute of Medical Sciences, K.R. Road, Bangalore.
14. Dr. B.R. Ambedkar Medical College, Kadugondanahalli, Bangalore.
15. B.L.D.E.A. Medical College, Bijapur - 586103.
16. M.S. Ramaiah Medical College, Bangalore.
17. St. John's Medical College, Bangalore.

ವಿಷಯ :- ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯರುಗಳ ಹಾಗೂ ಸಹ ಉಪಾಧ್ಯಾಯರ ವೇತನದಲ್ಲಿರುವ ತಾರತಮ್ಯ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 778 (857)

ಶ್ರೀ ಎ. ರಾಮದಾಸ್ (ಕೃಷ್ಣರಾಜ) :- ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯರ ಹಾಗೂ ಸಹ ಉಪಾಧ್ಯಾಯರ ವೇತನದಲ್ಲಿ ತಾರತಮ್ಯವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ವಿಷಯದಲ್ಲಿ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀ ಹೆಚ್. ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು) :-

ಅ) ಬಂದಿದೆ.

ಆ) ಸರ್ಕಾರದ ಪರಿಶೀಲನೆಯಲ್ಲಿದೆ.

ವಿಷಯ :- ಸರ್ಕಾರಿ ಆಸ್ಪತ್ರೆಗಳಲ್ಲಿ ಖಾಲಿ ಇರತಕ್ಕ ವೈದ್ಯರುಗಳ ಹುದ್ದೆಗಳ ಭರ್ತಿ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 782 (744)

ಶ್ರೀ ಡಿ. ವಿ. ಸದಾನಂದಗೌಡ, (ಪುತ್ತೂರು) :- ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಪ್ರಸ್ತುತ ಸರ್ಕಾರಿ ಆಸ್ಪತ್ರೆಗಳಲ್ಲಿ ಖಾಲಿ ಇರುವ ವೈದ್ಯರುಗಳ ಹುದ್ದೆ ಎಷ್ಟು?

ಆ) ಈಗಾಗಲೇ ಕಾಂಟ್ರಾಕ್ಟ್ ಪದ್ಧತಿಯಲ್ಲಿ ನೇಮಕಾತಿ ಮಾಡಿದ ಡಾಕ್ಟರುಗಳ ಹುದ್ದೆಯನ್ನು ಖಾಯಂಗೊಳಿಸಲಾಗುವುದೇ?

ಇ) ಖಾಲಿ ಇರುವ ಹುದ್ದೆಗಳನ್ನು ಯಾವ ಆಧಾರದಲ್ಲಿ ಭರ್ತಿ ಮಾಡ ಲಾಗುವುದು ಮತ್ತು ಎಷ್ಟು ಸಮಯದಲ್ಲಿ ಈ ಹುದ್ದೆಗಳನ್ನು ಭರ್ತಿ ಮಾಡಲಾಗುವುದು?

ಡಾ. ಹೆಚ್. ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :-

ಅ) 628.

ಆ) 1992 ನೇ ಸಾಲಿನಲ್ಲಿ ಗುತ್ತಿಗೆ ಆಧಾರದ ಮೇಲೆ ನೇಮಕಾತಿಗೊಂಡಿರುವ ವೈದ್ಯರುಗಳ ಸೇವೆಯನ್ನು ಖಾಯಂಗೊಳಿಸುವ ಬಗ್ಗೆ ಪರಿಶೀಲಿಸಲು ಸಮಿತಿಯನ್ನು ನೇಮಿಸಿದ್ದು, ಕಾರ್ಯ ಪ್ರಕ್ರಿಯೆಯಲ್ಲಿರುತ್ತದೆ.

ಇ) ಲೋಕ ಸೇವಾ ಆಯೋಗದಿಂದ ವೈದ್ಯರನ್ನು ಆಯ್ಕೆ ಮಾಡಲು ಸಂದರ್ಶನ ನಡೆಯುತ್ತಿದೆ ಹಾಗೂ ಗುತ್ತಿಗೆ ಆಧಾರದ ಮೇಲೆ ವೈದ್ಯರನ್ನು ನೇಮಕಾತಿ ಮಾಡಿ ಖಾಲಿ ಇರುವ ಹುದ್ದೆಗಳನ್ನು ಆದಷ್ಟು ಜಾಗ್ರತೆ ಭರ್ತಿ ಮಾಡಲಾಗುವುದು.

ವಿಷಯ :- ಸಂಸ್ಕೃತ ಶಾಲೆಗಳ ಶಿಕ್ಷಕರಿಗೆ ನಿವೃತ್ತಿ ವೇತನ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 784 (1300)

ಶ್ರೀ ಬಿ. ಬಿ. ಶಿವಪ್ಪ (ಸಕಲೇಶಪುರ) :- ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) 1979-80 ರಲ್ಲಿ ಸರ್ಕಾರ ಜಾರಿಗೆ ತಂದ ಅನುದಾನ ಸಂಹಿತೆಯನ್ವಯ ರಾಜ್ಯದಲ್ಲಿರುವ ಸಂಸ್ಕೃತ ಶಾಲೆಗಳೆಷ್ಟು? ಇದರಲ್ಲಿ ಎಷ್ಟು ಶಾಲೆಗಳು ಕಾರ್ಯ ನಿರ್ವಹಿಸುತ್ತಿವೆ?

ಆ) ಈ ಶಾಲೆಗಳಲ್ಲಿ ಪೂರ್ಣಾವಧಿ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿರುವ ಶಿಕ್ಷಕರ ಸಂಖ್ಯೆ ಎಷ್ಟು?

ಇ) ಈ ಶಿಕ್ಷಕರುಗಳ ಇತರೆ ಶಿಕ್ಷಕರುಗಳ ಮಾದರಿ ಟಿ.ಬಿ.ಎಫ್ ಮತ್ತು ನಿವೃತ್ತಿ ವೇತನದಿಂದ ವಂಚಿತರಾಗುತ್ತಿರುವ ವಿಷಯವು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಈ) ಬಂದಿದ್ದಲ್ಲಿ ಈ ತಾರತಮ್ಯವನ್ನು ನಿವಾರಿಸಲು ಸರ್ಕಾರದವರು ಕೈಗೊಳ್ಳ ಲಿರುವ ಕ್ರಮಗಳೇನು?